(30)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರಿಗೆ ಹೊಸದಾಗಿ ಫಾರ್ಮ ಡಿ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: 1. ಪ್ರಾಂಶುಪಾಲರು, ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರ ಮನವಿ ದಿನಾಂಕ: 30.08.2016.

2. ಕುಲಸಚಿವರು, ರಾ.ಆ.ವಿ.ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಿಎ/ಎಎಫ್‌ಎಫ್/ಪಿಹೆಚ್-65/2016-17,ದಿನಾಂಕ; 27.08.2015

3. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/72/ಯೋಜನೆ/2016-17, ದಿನಾಂಕ:19.01.2017.

***

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರ.ಸಂ (1)ರ ಮನವಿಯಲ್ಲಿ, ಪ್ರಾಂಶುಪಾಲರು, ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರು 2016-17ನೇ ಸಾಲಿನಿಂದ ಫಾರ್ಮ.ಡಿ ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ಪತ್ರದಲ್ಲಿ, ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ. ಬೆಂಗಳೂರು ಇವರು ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರು 2015-16ನೇ ಸಾಲಿಗೆ ಫಾರ್ಮ.ಡಿ ಕೋರ್ಸ್‌ನ್ನು ಪ್ರಾರಂಭಿಸಲು ಅಫಿಲಿಯೇಷನ್ ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (3)ರ ವರದಿಯಲ್ಲಿ, ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಈಸ್ಟ್ ಪಾಯಿಂಟ್ ಕಾಲೇಜ್ ಆರ್ಫ ಫಾರ್ಮಸಿ, ಬೆಂಗಳುರು ಇವರು ಫಾರ್ಮ ಡಿ. ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವುದಕ್ಕೆ ಸಂಬಂಧಿಸಿದಂತೆ, ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನ್ವಯ ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರು ಪ್ರಥಮ ವರ್ಷದ ಫಾರ್ಮ ಡಿ. ಕೋರ್ಸ್... ಪ್ರಾರಂಭಿಸಲು ಅಗತ್ಯವಿರುವಷ್ಟು ಉಪಕರಣಗಳು ಮತ್ತು ಸಲಕರಣೆಗಳು ಲಭ್ಯವಿರುತ್ತವೆ. ಸದರಿ ಸಂಸ್ಥೆಯಲ್ಲಿನ ಬಿ.ಫಾರ್ಮ ಮತ್ತು ಎಂ. ಫಾರ್ಮ ಕೋರ್ಸ್‌ಗಳಿಗೆ ಅಗತ್ಯವಿರುವಷ್ಟು ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿಯಿದ್ದು ಫಾರ್ಮ ಡಿ. ಕೋರ್ಸಿಗೆ ಅಗತ್ಯವಿರುವ ಹೆಚ್ಚುವರಿ ಸಿಬ್ಬಂದಿಯನ್ನು ಈಗಾಗಲೇ ಗುರುತಿಸಿದ್ದು, ನೇಮಕಾತಿ ಮಾಡುವುದಾಗಿ ತಿಳಿಸಿರುವುದರಿಂದ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಭಾರತೀಯ ವಿಜ್ಞಾನ ಪರಿಷತ್ತು 2016-17ನೇ ಸಾಲಿಗೆ ಅನುಮತಿ ನೀಡಿರುವುದರಿಂದ ಸೂಕ್ತ ಷರತ್ತುಗಳನ್ನು ವಿಧಿಸಿ 30 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಫಾರ್ಮ ಡಿ. ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡಬಹುದೆಂದು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಔಷಧ ನಿಯಂತ್ರಕರ ವರದಿ ಹಾಗೂ ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, 2016-17ನೇ ಶೈಕ್ಷಣಿಕ ವರ್ಷವು ಈಗಾಗಲೇ ಮುಕ್ತಾಯವಾಗಿರುವುದರಿಂದ, ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇವರು 2017-18ನೇ ಸಾಲಿನಿಂದ 30 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಫಾರ್ಮ ಡಿ. ಕೋರ್ಸ್ ಪ್ರಾರಂಭಿಸಲು ಭಾರತೀಯ ಫಾರ್ಮಸಿ

ಪರಿಷತ್ ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 279 ಪಿಟಿಡಿ 2016, ಬೆಂಗಳೂರು, ದಿನಾಂಕ:30.03.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಜ್ಞಾನಪ್ರಭಾ ಕ್ಯಾಂಪಸ್, # 147, ಬಿದರಹಳ್ಳಿ ಬೆಂಗಳೂರು ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 30 ವಿದ್ಯಾರ್ಥಿಗಳ ಪ್ರವೇಶಮಿತಿಯೊಂದಿಗೆ ಫಾರ್ಮ.ಡಿ ಕೋರ್ಸನ್ನು ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಫಾರ್ಮ.ಡಿ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಭಾರತೀಯ ಫಾರ್ಮಸಿ ಪರಿಷತ್ ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು, ನವದೆಹಲಿ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರಿಂದ ಅನುಮೋದನ/ಅನುಮತಿಯನ್ನು ಪಡೆಯತಕ್ಕದ್ದು.
2. ಕೋರ್ಸ್‌ನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಅಖಿಲ ಭಾರತ ತಾಂತಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ಕೇಂದ್ರ/ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರದ ಪೂರ್ವಾನುಮತಿಯಿಲ್ಲದೆ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.
9.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

ಇವರಿಗೆ:

1) The Registrar-cum-Secretary, Pharmacy Council of India. PB No. 7020. Combined Councils Building, Kotla Road. Aiwan-E-Ghalib Marg. New Delhi.
2) The Member Secretary, All India Council for Technical Education. Nelson Madela marg. New Delhi-110 067.

3) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4) ಅಧ್ಯಕ್ಷರು, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
5) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
6) ಪ್ರಾಂಶುಪಾಲರು, ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಜ್ಞಾನ ಪ್ರಭಾ ಕ್ಯಾಂಪಸ್, ನಂ. 147, ಬೀದರಹಳ್ಳಿ, ವೀರ್ಗೋ ನಗರ ಪೋಸ್ಟ್, ಬೆಂಗಳೂರು-560 049.

**ಪ್ರತಿಗಳು:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 279 ಪಿಟಿಡಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ:11.04.2017

## ತಿದ್ದುಪಡಿ

ಸರ್ಕಾರದ ಆದೇಶ ಸಂಖ್ಯೆ:ಆಕುಕ 279 ಪಿಟಿಡಿ 2016, ದಿನಾಂಕ: 30.03.2017ರಲ್ಲಿನ ಪ್ರಸ್ತಾವನೆ ಭಾಗದ 4ನೇ ವಾಕ್ಯ ವೃಂದದ 2ನೇ ಸಾಲಿನಲ್ಲಿರುವ 2016-17ನೇ ಶೈಕ್ಷಣಿಕ ವರ್ಷವು ಈಗಾಗಲೇ ಮುಕ್ತಾಯವಾಗಿರುವುದರಿಂದ, ಎನ್ನುವುದನ್ನು ಕೈಬಿಟ್ಟು 3ನೇ ಸಾಲಿನಲ್ಲಿರುವ 2017-18 ಮತ್ತು 2ನೇ ಪುಟದ ಆದೇಶ ಭಾಗದ 2ನೇ ಸಾಲಿನಲ್ಲಿರುವ 2017-18 ಎನ್ನುವುದನ್ನು **2016-17** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಬಿ.ಕಮಲಮ್ಮ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

**ಇವರಿಗೆ:**

1) The Registrar-cum-Secretary, Pharmacy Council of India, PB No. 7020, Combined Councils Building, Kotla Road, Aiwan-E-Ghalib Marg, New Delhi.
2) The Member Secretary, All India Council for Technical Education, Nelson Madela marg, New Delhi-110 067.
3) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4) ಅಧ್ಯಕ್ಷರು, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
5) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
6) ಪ್ರಾಂಶುಪಾಲರು, ಈಸ್ಟ್ ಪಾಯಿಂಟ್ ಕಾಲೇಜ್ ಆಫ್ ಫಾರ್ಮಸಿ, ಜ್ಞಾನ ಪ್ರಭಾ ಕ್ಯಾಂಪಸ್, ನಂ. 147, ಬೀದರಹಳ್ಳಿ, ವೀರ್ಗೋ ನಗರ ಪೋಸ್ಟ್, ಬೆಂಗಳೂರು-560 049.

**ಪ್ರತಿಗಳು:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.